ಈ) 17 ಹೊಸ ಕಾಲೇಜು ಕಟ್ಟಡಗಳಿಗೆ ಇತ್ತೀಚೆಗೆ ಮಂಜೂರಾತಿ ನೀಡಲಾಗಿದೆ. ಈ ಕಾಮಗಾರಿಗಳು ಸಧ್ಯದಲ್ಲೆ ಆರಂಭವಾಗಲಿವೆ.

ರಾಜ್ಯದಲ್ಲಿ ಭಾರತ ಸೇವಾದಳ ಘಟಕಗಳ ಸ್ಥಾಪನೆ

4565 (5298) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ "ಭಾರತ ಸೇವಾದಳ" ಘಟಕಗಳನ್ನು ಸ್ಥಾಪಿಸಲಾಗಿದೆ: (ಜಿಲ್ಲಾವಾರು ವಿವರ ನೀಡುವುದು)

ಆ) "ಭಾರತ ಸೇವಾ ದಳ" ದಲ್ಲಿ ತರಬೇತಿ ಹೊಂದಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ "ಗೌರವಧನ" ನೀಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದ ಒಟ್ಟು 27 ಜಿಲ್ಲೆಗಳಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ "ಭಾರತ ಸೇವಾದಳ" ದ ಘಟಕಗಳನ್ನು ಸ್ಥಾಪಿಸಲಾಗಿದೆ. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

ಆ) "ಭಾರತ ಸೇವಾದಳ" ದಲ್ಲಿ 10 ವರ್ಷಗಳ ಅವಿರತ ಸೇವಾ ಸಲ್ಲಿಸಿದ ಶಿಕ್ಷಕರಿಗೆ ಗೌರವ ಧನವನ್ನು ನೀಡುವ ಬಗ್ಗೆ ಪರಿಶೀಲಿಸಿ ಇದರಿಂದ ಉಂಟಾಗುವ ಆರ್ಥಿಕ ಹೊರೆಯನ್ನು ಗಮನದಲ್ಲಿರಿಸಿ ಈ ಕೋರಿಕೆಯನ್ನು ಸರ್ಕಾರ ಒಪ್ಪಿರುವುದಿಲ್ಲ.

ರಾಜ್ಯದಲ್ಲಿ ಪದವಿ ಪೂರ್ವ ಹಾಗೂ ಮೆಟ್ರಿಕ್ ಪರೀಕ್ಷೆ ಫಲಿತಾಂಶ

4566 (5299) : ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ 3 ಶೈಕ್ಷಣಿಕ ವರ್ಷಗಳಲ್ಲಿ ಮೆಟ್ರಿಕ್ ಹಾಗೂ ಪದವಿ ಪೂರ್ವ ತರಗತಿಗಳ ಫಲಿತಾಂಶಗಳ ಜಿಲ್ಲಾವಾರು ವಿವರ ನೀಡುವುದು?

ಶ್ರೀ ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಕಳೆದ 3 ಶೈಕ್ಷಣಿಕ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪದವಿ ಪೂರ್ವ ಪರೀಕ್ಷೆಗಳ ಜಿಲ್ಲಾವಾರು ಫಲಿತಾಂಶಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.